ಕಾರ್ಮಿಕ ನ್ಯಾಯಾಲಯಂದಲ್ಲಿರುವ ಮೊಕದ್ದಮೆಗಳ ಬಗ್ಗೆ

೨೫೦. ಶ್ರೀ ಪಿ. ಜಿ. ಆರ್. ಸಿಂಧ್ಯ (ಕನಕಪುರ).—ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ.

(ಅ) ರಾಜ್ಯದ ವಿವಿದ ಕಾರ್ಮಿಕ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಮೊಕದ್ದಮೆಗಳೆಷ್ಟು ? (ಜಿಲ್ಲಾವಾರು ವಿವರಗಳನ್ನು ನೀಡುವುದು)

ಆ) ಇವುಗಳನ್ನು ಹೇಗೆ ಬಗೆಹರಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇ ?

ಶ್ರೀ ಸಿ. ಎಸ್. ನಾಡಗೌಡ (ಕಾರ್ಮಿಕ ಸಚಿವರು).—

ಅ) ಒಟ್ಟು ೧೧,೩೨೪ (ಚಿಕ್ಕಮಂಗಳೂರು ಕಾರ್ಮಿಕ ನ್ಯಾಯಾಲಯ ಬಿಟ್ಟು) ಜಿಲ್ಲಾವಾರು ನ್ಯಾಯಾಲಯಗಳನ್ನು ಸ್ಥಾಪನೆ ಮಾಡಿರುವುದಿಲ್ಲ).

ಪ್ರತಿ ಜಿಲ್ಲೆಯಲ್ಲಿ ಒಂದು ಕಾರ್ಮಿಕ ನ್ಯಾಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. ಕಾರ್ಮಿಕ ನ್ಯಾಯಾಲಯದ ನ್ಯಾಯಾಧೀಶರ ಹಾಗೂ ಕಾರ್ಮಿಕ ಸಂಘಗಳ ಮತ್ತು ಆಡಳಿತ ವರ್ಗದವರ ಸಭೆಯೊಂದನ್ನು ಕರೆದು ವಿವಾದಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವ ಬಗ್ಗೆ ಚರ್ಚಿಸಲಾಗಿದೆ.

ಭೂಮಾಪನ ಇಲಾಖೆಯ ಸಿಬ್ಬಂದಿ ಕೊರತೆ ಬಗ್ಗೆ

೨೫೧. ಶ್ರೀ ಪಿ. ಜಿ. ಆರ್. ಸಿಂಧ್ಯ, (ಕನಕಪುರ).—ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಭೂಮಾಪನ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ, ಭೂಮಾಪನ ಸಿಬ್ಬಂದಿಯ ಕೊರತೆಯಿಂದಾಗಿ ರೈತರಿಗೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ;

ಇ) ಇವುಗಳನ್ನು ಪರಿಪಡಿಸಲು ಸರ್ಕಾರದ ವತಿಂದ ಏನಾದರೂ ಕಾರ್ಯಕ್ರಮಗಳಿವೆಯೇ ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಕಂದಾಯ ಸಚಿವರು).—

ಅ) ಹೌದು.

ಆ) ಹೌದು.

ಇ) ಎರಡನೇ ದರ್ಜೆ ಭೂಮಾಪಕರುಗಳ ಹುದ್ದೆಗೆ ೧೯೯೦ ಮಿತವೇತನ ಪದವೀಧರರನ್ನು ನೇಮಿಸಿಕೊಳ್ಳುವ ಯೋಜನೆ ಇದೆ, ಖಾಲಿ ಇದ್ದ ೩೦೦ ಎರಡನೇ ದರ್ಜೆ ಭೂಮಾಪಕರ ಹುದ್ದೆಗಳಲ್ಲಿ ೧೦೬ ಹುದ್ದೆಗಳನ್ನು ನಿಯಮಾನುಸಾರ ಮಿತವೇತನ ಪದವೀಧರರಿಂದ ಭರ್ತಿ ಮಾಡಿದೆ. ಮಿತವ್ಯಯ ಆದೇಶವನ್ನು ಸಡಿಲಿಸಿದ ನಂತರ ಉಳಿದ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಇ.ಎಸ್.ಐ. ಆಸ್ಪತ್ರೆಗಳಿಗೆ ಒದಗಿಸಲಾಗುತ್ತಿರುವ ಔಷಧಿಗಳು

೨೬೭. ಶ್ರೀ ಎಂ. ನಾರಾಯಣಸ್ವಾಮಿ (ಬೇತಮಂಗಲ).—ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ತಿಳಿಸುವರೆ ?

ಅ) ಬೆಂಗಳೂರು ನಗರದಲ್ಲಿರುವ ಇ.ಎಸ್.ಐ. ಆಸ್ಪತ್ರೆಗಳು ಹಾಗೂ ಡಿಸ್ಪೆನ್ಸರಿಗಳಲ್ಲಿ ಕಾರ್ಮಿಕರಿಗಾಗಿ ಕೊಡುವ ಔಷಧಿ ಮಾತ್ರೆಗಳು ಮತ್ತು ಇಂಜೆಕ್ಷನ್‌ಗಳನ್ನು ನಗರದ ಹಲವಾರು ಖಾಸಗಿ ಮೆಡಿಕಲ್ ಸ್ಟೋರ್‌ಗಳಲ್ಲಿ ಮಾರಾಟ ಮಾಡುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಸರ್ಕಾರದವರು ಇಂತಹ ಅಕ್ರಮಗಳನ್ನು ತಡೆಗಟ್ಟಲು ಜಾಗೃತದಳವನ್ನು ರಚಿಸುವರೆ ?

ಇ) ಹಾಗಿದ್ದಲ್ಲಿ ಇಂಥಹ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರದ ಇತರೆ ಕ್ರಮಗಳಾವುವು ?